ದಿನಾಂಕ 02-01-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿಯವರ ಪರವಾಗಿ ಮೇಡಮ್ ಎ.ಡಿ.ಕೆ. ವಕೀಲರವರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿರುತ್ತೇನೆ. ನಾನು ಸಹಿ ಮಾಡಿರುವ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ನನ್ನ ಹೇಳಿಕೆಯ ಮೇರೆಗೆ ತಯಾರಿಸಲಾಗಿದೆ ಮತ್ತು ಅದರಲ್ಲಿರುವ ವಿಷಯಗಳು ಸರಿ ಇವೆ.

ದಿನಾಂಕ 16.10.2001 ರ ವಿಭಾಗ ಪತ್ರದ ಮೂಲ ಪ್ರತಿಯು ಎಲ್ಲಿ ಇದೆ ಎನ್ನುವ ಬಗ್ಗೆ ನನಗೆ ತಿಳಿದಿಲ್ಲ. ಆ ಕಾರಣದಿಂದ ಅದರ ದೃಢೀಕೃತ ನಕಲನ್ನು ಹಾಜರು ಮಾಡಿರುತ್ತೇನೆ, ಅದನ್ನು ನಿಪಿ.1 ಎಂದು, ಸರ್ವೇ ನಂಬ್ರ 70/6 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು, ಸರ್ವೇ ನಂಬ್ರ 90/5 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು, ಸರ್ವೇ ನಂಬ್ರ 65/13 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು, ಸರ್ವೇ ನಂಬ್ರ 87/2 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದುಗುರ್ತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲುಃ ಪ್ರತಿವಾದಿ 2,4 ಮತ್ತು 5 ರವರ ಪರ ವಕೀಲರ ಸಮಯವನ್ನು ಕೋರಿದ್ದು, ಸಮಯವನ್ನು ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು. )

ಓ.ಹೇ.ಕೇ.ಸ.ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ.ಮತ್ತು ಎಸಿಜೆಎಂ,
ಉಡುಪಿ.